# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ - ೪ಎ<br>Part – IVA | ಬೆಂಗಳೂರು, ಗುರುವಾರ, ೨೭, ಜುಲೈ, ೨೦೨೩ (ಶ್ರಾವಣ, ೦೫, ಶಕವರ್ಷ, ೧೯೪೫)<br>BENGALURU, THURSDAY, 27, JULY, 2023 (SHRAVANA, 05, SHAKAVARSHA, 1945) | ನಂ. ೩೩೯<br>No. 339 |


## PARLIAMENTARY AFFAIRS AND LEGISLATION SECRETARIAT

## NOTIFICATION

**NO: DPAL 25 SHASANA 2023, BENGALURU, DATED: 27.07.2023**

The Karnataka Scheduled Castes and Scheduled Tribes (Prohibition of Transfer of Certain Lands) (Amendment) Bill, 2023 ಇದಕ್ಕೆ 2023ರ ಜುಲೈ ತಿಂಗಳ 27ನೇ ದಿನಾಂಕದಂದು ರಾಜ್ಯಪಾಲರ ಅನುಮತಿ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2023ರ ಕರ್ನಾಟಕ ಅಧಿನಿಯಮ ಸಂಖ್ಯೆ: 30 ಎಂಬುದಾಗಿ ಕರ್ನಾಟಕ ರಾಜ್ಯಪತ್ರದ ವಿಶೇಷ ರಾಜ್ಯಪತ್ರಿಕೆ (ಭಾಗ-IV) ಯಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

# KARNATAKA ACT NO. 30 OF 2023

**(First Published in the Karnataka Gazette Extra-ordinary on the 27th day of July, 2023)**

## THE KARNATAKA SCHEDULED CASTES AND SCHEDULED TRIBES (PROHIBITION OF TRANSFER OF CERTAIN LANDS) (AMENDMENT) ACT, 2023

(Received the assent of the Governor on the 27th day of July, 2023)

An Act further to amend the Karnataka Scheduled Castes and Scheduled Tribes (Prohibition of Transfer of Certain Lands) Act, 1978.

Whereas it is expedient to amend the Karnataka Scheduled Castes and Scheduled Tribes (Prohibition of Transfer of Certain Lands) Act, 1978 (Karnataka Act No.2 of 1979), for the purposes hereinafter appearing;

Be it enacted by the Karnataka State Legislature in the Seventy fourth year of Republic of India as follows:-

**1. Short title and commencement.-** (1) This Act may be called the Karnataka Scheduled Castes and Scheduled Tribes (Prohibition of Transfer of Certain Lands) (Amendment) Act, 2023.

(2) It shall come into force at once.

**2. Amendment of section 5.-** In the Karnataka Scheduled Castes and Scheduled Tribes (Prohibition of Transfer of Certain Lands) Act, 1978 (Karnataka Act No.2 of 1979), in section 5, in sub-section (1), after clause (b), the following clauses shall be inserted and shall always deemed to have been inserted, namely:-

"(c) notwithstanding anything contained in any law, there shall be no limitation of time to invoke the provisions of this Act.

(d) the provisions of clause (c) shall apply to all cases pending before all the competent authorities and all Courts of Law adjudicating the cases under this section."

By Order and in the name of
the Governor of Karnataka,
**G. SRIDHAR**
Secretary to Government
Department of Parliamentary
Affairs and Legislation

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ
## ಅಧಿಸೂಚನೆ
**ಸಂಖ್ಯೆ: ಸಂವ್ಯಶಾಇ 25 ಶಾಸನ 2023, ಬೆಂಗಳೂರು, ದಿನಾಂಕ: 27.07.2023.**

The Karnataka Official Language Act, 1963 (Karnataka Act 26 of 1963)ರ ಪ್ರಕರಣ 5-A ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ the Karnataka Scheduled Castes and Scheduled Tribes (Prohibition of Transfer of Certain Lands) (Amendment) Act, 2023 (Karnataka Act No. 30 of 2023) ರ ಭಾಷಾಂತರವನ್ನು ಅಧಿಕೃತ ಕನ್ನಡ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ರಾಜ್ಯಪತ್ರಿಕೆ (ಭಾಗ-IV) ಯಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2023ರ ಕರ್ನಾಟಕ ಅಧಿನಿಯಮ ಸಂಖ್ಯೆ: 30**

(2023 ರ ಜುಲೈ ತಿಂಗಳ 27ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ) (ತಿದ್ದುಪಡಿ) ಅಧಿನಿಯಮ, 2023

(2023 ರ ಜುಲೈ ತಿಂಗಳ 27ನೇ ದಿನಾಂಕದಂದು ರಾಜ್ಯ ಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ) ಅಧಿನಿಯಮ, 1978ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ) ಅಧಿನಿಯಮ, 1978 (1979ರ ಕರ್ನಾಟಕ ಅಧಿನಿಯಮ ಸಂ. 2) ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ) (ತಿದ್ದುಪಡಿ) ಅಧಿನಿಯಮ, 2023 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 5ರ ತಿದ್ದುಪಡಿ.-** ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ) ಅಧಿನಿಯಮ, 1978 (1979ರ ಕರ್ನಾಟಕ ಅಧಿನಿಯಮ ಸಂಖ್ಯೆ:2)ರ 5ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿನ (ಬಿ) ಖಂಡದ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ತರುವಾಯ ಈ ಮುಂದಿನ ಖಂಡಗಳನ್ನು ಸೇರಿಸತಕ್ಕದ್ದು ಹಾಗೂ ಅವುಗಳನ್ನು ಯಾವಾಗಲೂ ಸೇರಿಸಲಾಗಿದೆ ಎಂದು ಭಾವಿಸತಕ್ಕದ್ದು, ಎಂದರೆ:-

"(ಸಿ) ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಉಪಬಂಧಗಳನ್ನು ಅನ್ವಯಿಸಲು ಯಾವುದೇ ಕಾಲಮಿತಿ ಇರತಕ್ಕದ್ದಲ್ಲ;

(ಡಿ) ಈ ಪ್ರಕರಣದ ಮೇರೆಗೆ ಮೊಕದ್ದಮೆಗಳನ್ನು ನ್ಯಾಯ ನಿರ್ಣಯ ಮಾಡುವ ಎಲ್ಲಾ ಸಕ್ಷಮ ಪ್ರಾಧಿಕಾರಗಳ ಮತ್ತು ಎಲ್ಲಾ ನ್ಯಾಯಾಲಯಗಳ ಮುಂದೆ ಬಾಕಿಯಿರುವ ಎಲ್ಲಾ ಪ್ರಕರಣಗಳಿಗೆ (ಸಿ) ಖಂಡದ ಉಪಬಂಧಗಳು ಅನ್ವಯವಾಗತಕ್ಕದ್ದು."

The above translation of the Karnataka Scheduled Castes and Scheduled Tribes (Prohibition of Transfer of Certain Lands) (Amendment) Act, 2023 (Karnataka Act 30 of 2023) shall be authoritative text in Kannada language under section 5-A of the Karnataka Official Language Act, 1963 (Karnataka Act 26 of 1963).

**ಥಾವರ್‌ಚಂದ್ ಗೆಹ್ಲೋಟ್**
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ.ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

S VISWANATH